# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 172

ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್.ಎಸ್ ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ವಿಷಯ : ಯಾತ್ರಿ ನಿವಾಸ ನಿರ್ಮಾಣದ ಕಾಮಗಾರಿಗೆ ಅನುದಾನ ಬಿಡುಗಡೆ ಬಗ್ಗೆ.

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಹಾಗೂ ರೇಷ್ಮೆ ಇಲಾಖೆ ಸಚಿವರು

ಉತ್ತರಿಸುವ ದಿನಾಂಕ : 10.12.2018

| ಕ್ರ. ಸ. | ಪ್ರಶ್ನೆ | ಉತ್ತರ |
|---|---|---|
| ಅ) | 2017-18ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ದೇವಿಪೂರ. ನವಲಕಲ್ ಮಠದ ಹತ್ತಿರ ಯಾತ್ರಿನಿವಾಸ ನಿರ್ಮಾಣಕ್ಕೆ ಮಂಜೂರಾಗಿರುವ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡದಿರುವುದಕ್ಕೆ ಕಾರಣಗಳೇನು: | 2018-19ನೇ ಸಾಲಿನಲ್ಲಿ ಈ ಎರಡೂ ಕಾಮಗಾರಿಗಳನ್ನು ಪ್ರಾರಂಭಿಸುವ ಸಲುವಾಗಿ ಪ್ರತಿ ಕಾಮಗಾರಿಗೆ ರೂ.10.00 ಲಕ್ಷಗಳನ್ನು ಬಿಡುಗಡೆ ಮಾಡಲು ಕ್ರಮ ವಹಿಸಲಾಗುತ್ತಿದೆ. |
| ಆ) | ರಾಯಚೂರು ನಗರದಲ್ಲಿರುವ ಪ್ರಾಚೀನ ಕೋಟೆ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ: ಹಾಗಿದ್ದಲ್ಲಿ, ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ? | ರಾಯಚೂರು ನಗರದಲ್ಲಿರುವ ಪ್ರಾಚೀನ ಕೋಟೆ ಅಭಿವೃದ್ಧಿ ಕಾಮಗಾರಿಯನ್ನು ರೂ.450.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಸರ್ಕಾರದ ಅನುಮೋದನೆ ನೀಡಿ ರೂ.200.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.<br><br>ರಾಯಚೂರು ಕೋಟೆಯು ಪರಂಪರಾ ಕೋಟೆಯಾಗಿರುವುದರಿಂದ ಸಿಮೆಂಟ್ ಮಾರ್ಟರ್ ಬದಲು ಸುಣ್ಣದ ಗಾರೆ ಉಪಯೋಗಿಸಿ ನಿರ್ಮಿಸಲು ಪರಿಷ್ಕೃತ ಅಂದಾಜುಪಟ್ಟಿ ಸಿದ್ಧಪಡಿಸಿಕೊಳ್ಳಲಾಗುತ್ತಿದೆ ಎಂದು ಕಾರ್ಯಪಾಲಕ ಅಭಿಯಂತರರು ಲೋಕೋಪಯೋಗಿ ಇಲಾಖೆ ರಾಯಚೂರು ರವರು ತಿಳಿಸಿರುತ್ತಾರೆ. ಪರಿಷ್ಕೃತ ಅಂದಾಜು ಪಟ್ಟಿಯನ್ನು ಜರೂರಾಗಿ ಸಿದ್ಧಪಡಿಸಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |

ಸಂಖ್ಯೆ: ಪ್ರಇ 103 ಪ್ರವಾವಿ 2018

(ಸಾ.ರಾ.ಮಹೇಶ್)
ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.